# ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ, ಬೆಂಗಳೂರು

# Karnataka Real Estate Regulatory Authority, Bengaluru

ನಂ: 1/14, ನೆಲಮಹಡಿ, ಸಿಲ್ವರ್ ಜ್ಯೂಬಿಲಿ ಬ್ಲಾಕ್, ಯುನಿಟ್ ಬಿಲ್ಡಿಂಗ್ ಹಿಂಭಾಗ, ಸಿ.ಎಸ್.ಐ.ಕಾಂಪೌಂಡ್, 3ನೇ ಕ್ರಾಸ್, ಮಿಷನ್ ರಸ್ತೆ, ಬೆಂಗಳೂರು-560027.

NOT AN OFFICIAL COPY

ಉಪಸ್ಥಿತರು: ಕೆ. ಪಾಲಾಕ್ಷಪ್ಪ, ನ್ಯಾಯ ನಿರ್ಣಯಾಧಿಕಾರಿ

ದಿನಾಂಕ: 30 ನೇ ಮೇ 2020

| | |
|---|---|
| ಫಿರ್ಯಾದು ಸಂಖ್ಯೆ : | **CMP/190924/0004282** |
| ಫಿರ್ಯಾದುದಾರರು : | Rajadurai Swamikesavan<br>A301, Keshav Dugar Apartments,<br>1/30, East Avenue,<br>Keshavaperumalpuram,<br>Ra Puram,Tamil Nadu,<br>Chennai – 600028. |
| ಎದುರಿದಾರರು : | SHRIRAM SUMMITT<br>Shriram Properties Pvt. Ltd.,<br>No.40/43, 8th Main, 4th Cross,<br>RMV Extension, Sadashiva Nagar<br>Bengaluru – 560080.<br>Rep. by: Smt. Monica Patil, Advocate. |

"ತೀರ್ಪು"

ಫಿರ್ಯಾದುದಾರರಾದ **RAJADURAI SWAMIKESAVAN** ಇವರು ಎದುರಿ ಡೆವಲಪರ್ ವಿರುದ್ಧ ಈ ಫಿರ್ಯಾದನ್ನು ರೇರಾ ಕಾಯ್ದೆ ಕಲಂ 31 ರಂತೆ ಸಲ್ಲಿಸಿರುತ್ತಾರೆ. ಎದುರಿ ಡೆವಲಪರ್ ಅಭಿವೃದ್ಧಿಪಡಿಸುತ್ತಿರುವ **SHRIRAM SUMMITT** ಇದರಲ್ಲಿ ಗ್ರಾಹಕರಾಗಿರುತ್ತಾರೆ. ಅವರ ಫಿರ್ಯಾದಿನಲ್ಲಿರುವ ಅವರು ಕೇಳಿರುವ ಪರಿಹಾರವು ಹೀಗೆ ಇರುತ್ತದೆ.

> *Shriram properties agreed to construct and handover by December 2006 as per the agreement. But project was completed and registered and handed over on 28th Feb 2019. Delay of 26 months. Grace period provided is 6 month. So 20 months delay and compensation as per the RERA to be paid by Shriram properties.*
>
> *Relief Sought from RERA : As per RERA seeking compensation from the builder*

2. ಫಿರ್ಯಾದನ್ನು ನೋದಾಯಿಸಿಕೊಂಡು ಪಕ್ಷಕಾರರಿಗೆ ನೋಟಿಸ್ ನೀಡಲಾಯಿತು. ಪ್ರಕರಣವನ್ನು ಕರೆಸಿದಾಗ ಫಿರ್ಯಾದುದಾರರು ಹಾಜರಿ. ಡೆವಲಪರ್ ಪರ ಶ್ರೀಮತೀ. ಮೋನಿಕಾ ಪಾಟೀಲ್ ವಕೀಲರು ಹಾಜರಾಗಿ ವಕಾಲತ್ ಹಾಕಿದ್ದಾರೆ.

30/05/2020

NOT AN OFFICIAL COPY

3. ವಾದವನ್ನು ಕೇಳಿದ್ದೇನೆ.
4. ಈಗ ನನ್ನ ಮುಂದೆ ನಿರ್ಣಯಕ್ಕೆ ಬಂದಿರುವ ಸಂಗತಿ ಎಂದರೆ,
   a. ಫಿರ್ಯಾದುದಾರರು ಸಲ್ಲಿಸಿರುವ ಫಿರ್ಯಾದಿನಲ್ಲಿರುವ ಪರಿಹಾರಕ್ಕೆ ಅರ್ಹರಿರುತ್ತಾರೆಯೇ?
   b. ಅದಕ್ಕೆ ನನ್ನ ಉತ್ತರ ಸಕಾರಾತ್ಮಕವಾಗಿ ಈ ಕೆಳಕಂಡ ಕಾರಣಗಳಿಗಾಗಿ

**ಕಾ ರ ಣ ಗ ಳು**

5. ಈ ಕೇಸಿನಲ್ಲಿ ಫಿರ್ಯಾದುದಾರರು ಡೆವಲಪರ್ ವತಿಯಿಂದ ತನಗೆ *Delay Compensation* ಬರಬೇಕು ಎಂದು ಕೇಳುತ್ತಾರೆ. ರೇರಾ ಕಾಯ್ದೆ ಕಲಂ 18ನ್ನು ಓದಿಕೊಂಡಾಗ ತಿಳಿದುಬರುವುದೇನೆಂದರೆ ಯಾವ ಡೆವಲಪರ್ ಇವರು ತಾನೇ ಬರೆದುಕೊಟ್ಟ ಒಪ್ಪಂದ ಪತ್ರದಲ್ಲಿ ಒಪ್ಪಿಕೊಂಡ ದಿನಾಂಕಕ್ಕೆ ಅನುಗುಣವಾಗಿ ತಮ್ಮ ಪ್ರಾಜೆಕ್ಟ್ ಅನ್ನು ಮುಕ್ತಾಯಗೊಳಿಸುವುದಿಲ್ಲವೋ ಮತ್ತು ಯಾವ ಗ್ರಾಹಕರು ಪ್ರಾಜೆಕ್ಟ್‌ನಿಂದ ಹೊರಗೆ ಹೋಗಲು ಇಚ್ಛಿಸುವುದಿಲ್ಲವೋ ಅಂತಹ ಸಂದರ್ಭದಲ್ಲಿ ಆ ಪ್ರಾಜೆಕ್ಟ್‌ನ ಡೆವಲಪರ್ ಇವರು ಪ್ರತೀ ತಿಂಗಳ ವಿಳಂಬಕ್ಕೆ ಅನುಗುಣವಾಗುವಂತೆ ಫಿರ್ಯಾದುದಾರರಿಗೆ ಕಾನೂನು ಬದ್ಧ ಸ್ವಾಧೀನ ಕೊಡುವವರೆಗೆ ಬಡ್ಡಿ ರೂಪದಲ್ಲಿ ಪರಿಹಾರವನ್ನು ಕೊಡಬೇಕಾಗುತ್ತದೆ.

6. ಡೆವಲಪರ್ ಪರ ವಾದವನ್ನು ಮಂಡಿಸಿದ ವಕೀಲರು ತಮ್ಮ ವಾದ ಮಂಡನೆಯ ಸಂದರ್ಭದಲ್ಲಿ ಹೇಳುವುದೇನೆಂದರೆ ಫಿರ್ಯಾದುದಾರರು ಸಲ್ಲಿಸಿದ ಫಿರ್ಯಾದಿನಲ್ಲಿ ಯಾವುದೇ ವಿವರಣೆ ಇಲ್ಲ. ಆದ್ದರಿಂದ ಅವರ ಫಿರ್ಯಾದು ನಿಯಮಕ್ಕೆ ಅನುಗುಣವಾಗಿ ಇರುವುದಿಲ್ಲ ಅಂತ ಹೇಳುತ್ತಾರೆ. ಆದರೆ ಡೆವಲಪರ್ ಇವರು ತೆಗೆದುಕೊಂಡಿರುವ ನಿಲುವು ಸರಿಯಲ್ಲ. ಏಕೆಂದರೆ ಫಿರ್ಯಾದುದಾರರು ಡೆವಲಪರ್ ಇವರು ಅಭಿವೃದ್ಧಿಪಡಿಸುತ್ತಿರುವ ಪ್ರಾಜೆಕ್ಟ್‌ನಲ್ಲಿ ಗ್ರಾಹಕರಾಗಿರುತ್ತಾರೆ. ದಿನಾಂಕ:05.02.2020 ರಂದು ಸಲ್ಲಿಸಿರುವ ತಕರಾರನ್ನು ಗಮನಿಸಿಕೊಂಡಾಗ ಫಿರ್ಯಾದುದಾರರು *Shriram Summitt* ಎನ್ನುವ ಪ್ರಾಜೆಕ್ಟ್‌ನಲ್ಲಿ *Apartment* ಅನ್ನು ಖರೀದಿಸಲು ಒಪ್ಪಿಕೊಂಡಿದ್ದರು ಮತ್ತು ಆ ಸಂಬಂಧ ದಿನಾಂಕ: 23/07/2014ರಂದು ಒಪ್ಪಂದ ಪತ್ರವನ್ನು ಮಾಡಿಕೊಂಡಿದ್ದಾರೆ. ಮತ್ತು ಅದೇ ದಿನ ಮತ್ತು *Construction Agreement* ಮಾಡಿಕೊಂಡಿರುವುದು ಸಿದ್ಧವಾಗುತ್ತದೆ.

7. ಇನ್ನು ಡೆವಲಪರ್ ಪರ ವಕೀಲರು ಈ ಫಿರ್ಯಾದಿನ ಬಗ್ಗೆ ಕೆಲವು ತಾಂತ್ರಿಕ ಕಾರಣಗಳ ಬಗ್ಗೆ ಹೇಳುತ್ತಾರೆ. ನಿಯಮ 30 ರ ಪ್ರಕಾರ ಸಲ್ಲಿಸಿರುವ ಈ ಫಿರ್ಯಾದನ್ನು *Summary trial* ಅಂತ ವಿಚಾರಣೆ ಮಾಡಬೇಕಾಗುತ್ತದೆ. ಮೇಲಾಗಿ ಇಂತಹ ಫಿರ್ಯಾದುಗಳಿಗೆ *Pleading* ತತ್ವ ಅನ್ವಯವಾಗುವುದಿಲ್ಲ. ಅದಕ್ಕೂ ಮಿಗಿಲಾಗಿ ಇಂತಹ ಫಿರ್ಯಾದುಗಳನ್ನು ರೇರಾ ಕಾಯ್ದೆ ಕಲಂ

30/05/2020

# ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ, ಬೆಂಗಳೂರು

# Karnataka Real Estate Regulatory Authority, Bengaluru

ನಂ: 1/14, ನೆಲಮಹಡಿ, ಸಿಲ್ವರ್ ಜ್ಯೂಬಿಲಿ ಬ್ಲಾಕ್, ಯುನಿಟಿ ಬಿಲ್ಡಿಂಗ್ ಹಿಂಭಾಗ, ಸಿ.ಎಸ್.ಐ.ಕಾಂಪೌಂಡ್,
3ನೇ ಕ್ರಾಸ್, ಮಿಷನ್ ರಸ್ತೆ, ಬೆಂಗಳೂರು-560027.

NOT AN OFFICIAL COPY

71(2)ರ ಪ್ರಕಾರ 60 ದಿನಗಳೊಳಗಾಗಿ ಇತ್ಯರ್ಥ ಪಡಿಸಬೇಕಾಗಿದೆ. ಆ ಹಿನ್ನೆಲೆಯನ್ನು ಗಮನದಲ್ಲಿಟ್ಟುಕೊಂಡಾಗ ನಿಯಮ 30 ರಲ್ಲಿ ತೀರ್ಮಾನದನ್ನು ಹೇಗೆ ನಡೆಸಿಕೊಳ್ಳಬೇಕೆನ್ನುವುದರ ಬಗ್ಗೆ ಬರೆಯಲಾಗಿದೆ. ನಿಯಮ 30(2) ಅನ್ನು ನೋಡಿಕೊಂಡಾಗ ಅದರಲ್ಲಿ ಹೀಗೆ ಬರೆಯಲಾಗಿದೆ.

> *(e). In case the adjudicating officer is satisfied on the basis of the submission made that the complainant does not require any further enquiry it may dismiss the complaint;*
>
> *(f). In case the adjudicating officer is satisfied on the basis of the submission made that there is need for further hearing in to the complaint it may order production of documents or other evidence on a date and time fixed by him;*
>
> *(g). the adjudicating officer shall have the power to carry out an enquiry into the complaint on the basis of documents and submission;*
>
> *(h). the adjudicating officer shall have the power to summon and enforce the attendance of any person acquainted with the facts and circumstances of the case to give evidence or to produce any documents which in the opinion of the adjudicating officer, may be useful for or relevant to the subject matter of the enquiry, and in taking such evidence, the adjudicating officer shall not be bounded to observed the provisions of the Indian Evidence Act, 1872 (Central Act 11 of 1872);*

8. ಈ ಮೇಲಿನ 4 ನಿಯಮಗಳನ್ನು ನೋಡಿಕೊಂಡಾಗ ವಿಚಾರಣೆಯನ್ನು ಯಾವ ಯಾವ ರೀತಿಯಲ್ಲಿ ನಡೆಸಬೇಕೆಂಬುದನ್ನು ನ್ಯಾಯ ನಿರ್ಣಯಾಧಿಕಾರಿಯ ವಿವೇಚನೆಗೆ ಬಿಡಲಾಗಿದೆ. ಅವರು ಅಗತ್ಯ ಬಿದ್ದಲ್ಲಿ ಸಾಕ್ಷಿದಾರರ ವಿಚಾರಣೆ ಮಾಡಬಹುದಾಗಿದೆ. ನಿಯಮ 30(2)(*e*)(*f*)ನಲ್ಲಿರುವ ಅಂಶಗಳನ್ನು ಗಮನಿಸಿಕೊಂಡರೆ ಪಕ್ಷಕಾರರು ಹಾಜರು ಪಡಿಸಿರುವ ದಾಖಲೆಗಳು ಅಥವಾ ಅವರು ಮಾಡಿರುವ ಮನವಿ ಮತ್ತು ಅವರು ನೀಡಿದ ದಾಖಲೆಗಳ ಪ್ರಕಾರ ಪ್ರಕರಣವನ್ನು ಇತ್ಯರ್ಥಪಡಿಸಬಹುದಾಗಿದೆ. ತೀರಾ ಅನಿವಾರ್ಯವಾದರೆ ಮಾತ್ರ ಸಾಕ್ಷ್ಯವನ್ನು ಬರೆದುಕೊಳ್ಳಬಹುದಾಗಿದೆ.

NOT AN OFFICIAL COPY

9. ರೇರಾ ಕಾಯ್ದೆ ಕಲಂ 35(2) ರ ಪ್ರಕಾರ ಹೋದರೆ ಈ ಪ್ರಾಧಿಕಾರವು ಕೂಡಾ *CPC* ಯಲ್ಲಿರುವ ಅಂಶವನ್ನು ಬಳಸಿಕೊಳ್ಳಬಹುದಾಗಿದೆ. ಆದರೆ ಅದಕ್ಕೂ ಕೂಡಾ ಒಂದು ಮಿತಿ ಇದೆ. ಆ ಹಿನ್ನೆಲೆಯಲ್ಲಿ ಡೆವಲಪರ್ ಪರ ಮಾಡಿದ ವಾದವನ್ನು ಒಪ್ಪಿಕೊಳ್ಳಲಾಗದು. ಡೆವಲಪರ್ ಪರ ವಕೀಲರು ತಮ್ಮ ಮತ್ತು ಫಿರ್ಯಾದುದಾರರ ನಡುವೆ ನಡೆದಿರುವ ಒಪ್ಪಂದ ಪತ್ರವು ರೇರಾ ಕಾಯ್ದೆ ಜಾರಿಗೆ ಬರುವ ಮೊದಲೇ ನಡೆದಿರುತ್ತದೆ, ಆದ್ದರಿಂದ ಫಿರ್ಯಾದುದಾರರು ಕೇಳಿದ ಪರಿಹಾರವನ್ನು ಕೊಡಲು ಬರುವುದಿಲ್ಲ ಅಂತ ವಾದಿಸುತ್ತಾರೆ. ಒಪ್ಪಂದ ಪತ್ರದ ಪ್ರಕಾರ ತಾನು ಜುಲೈ 2017ರಿಂದ ಮಾತ್ರ ಒಂದು ಚದುರಡಿಗೆ ರೂ. 6/- ಗಳಂತೆ *Delay Compensation* ಕೊಡಲು ಒಪ್ಪಿಕೊಂಡಿದ್ದೇನೆ ಎಂದು ಹೇಳುತ್ತಾರೆ.

10. ಹಾಗೆ ವಾದವನ್ನು ಮಂಡಿಸುತ್ತಾ ಒಪ್ಪಂದ ಪತ್ರದಲ್ಲಿ ಡಿಸೆಂಬರ್ 2016 ಅಂತ ನಮೂದಿಸಿದ್ದರೂ ಕೂಡಾ ವಿಳಂಬವಾಗಲು ಕಾರಣಗಳೇನು ಅಂತ ನೋಡಬೇಕು ಅಂತ ಹೇಳುತ್ತಾರೆ. ರಾಜ್ಯದಲ್ಲಿ ನಡೆದ ಮುಷ್ಕರಗಳು, *Demonetisation* ಮತ್ತು ಇತರೆ ಕಾರಣಗಳಿಂದಾಗಿ ತನ್ನ ಪ್ರಾಜೆಕ್ಟ್‌ನ ಕೆಲಸದಲ್ಲಿ ವಿಳಂಬವಾಗಿರುತ್ತದೆ ಎನ್ನುವುದನ್ನು ಕೂಡಾ ಗಮನದಲ್ಲಿಟ್ಟುಕೊಳ್ಳಬೇಕಾಗುತ್ತದೆ. ಈ ಪ್ರಾಜೆಕ್ಟ್‌ನ ಕೆಲವು ಗ್ರಾಹಕರು ಮಾತ್ರ ಅಂದರೆ ಗ್ರಾಹಕರ ನಿಲುವನ್ನು ಮಾತ್ರ ಕೇಳದೆ ಡೆವಲಪರ್ ಇವರ ಕಷ್ಟಗಳ ಬಗ್ಗೆ ಕೂಡಾ ನೋಡಬೇಕು ಎಂದು ಹೇಳುತ್ತಾರೆ. ಒಪ್ಪಂದ ಪತ್ರದಲ್ಲಿರುವ ನಿಬಂಧನೆಗಳಿಗೆ ಒಪ್ಪಿಕೊಂಡೇ ಫಿರ್ಯಾದುದಾರರು ಸಹಿ ಮಾಡಿ ಕೊಟ್ಟಿರುವುದರಿಂದ ಈಗ ಅವರು ಡೆವಲಪರ್ ವಿರುದ್ಧ ಹೇಳುವುದೇನೂ ಇಲ್ಲ ಎಂದು ವಾದಿಸುತ್ತಾರೆ. ಒಪ್ಪಂದ ಪತ್ರದ ಪ್ರಕಾರ ತಾನು ಡಿಸೆಂಬರ್ 2016 & 6 ತಿಂಗಳ *Grace Period* ಅಂದರೆ ಜೂನ್ 2017ರ ವರೆಗೂ ತನಗೆ ಪ್ರಾಜೆಕ್ಟ್ ಅನ್ನು ಮುಕ್ತಾಯಗೊಳಿಸಲು ಅವಕಾಶವಿತ್ತು. ಆದ್ದರಿಂದಲೇ ತಾನು ಜುಲೈ 2017ರ ನಂತರ ಪ್ರಾಜೆಕ್ಟ್ ಅನ್ನು ಮುಕ್ತಾಯಗೊಳಿಸಲು ವಿಫಲರಾದಲ್ಲಿ ತಾನು *Delay Compensation* ಅನ್ನು ಒಪ್ಪಂದ ಪತ್ರದ ಪ್ರಕಾರ ಕೊಡಲು ಸಿದ್ಧ ಎಂದು ವಾದಿಸುತ್ತಾರೆ. ಆದರೆ ಅವರ ವಾದ ಮಂಡನೆ ಸರಿಯಾಗಿರುವುದಿಲ್ಲ. ಏಕೆಂದರೆ ರೇರಾ ಕಾಯ್ದೆ ಕಲಂ 18ರ ಪ್ರಕಾರ ಅವರು *Delay Compensation* ಕೊಡಬೇಕಾಗುತ್ತದೆ.

11. ಡೆವಲಪರ್ ಪರ ವಾದ ಮಂಡಿಸಿದ ವಕೀಲರು ಈ ಕಾಯ್ದೆ ಜಾರಿಗೆ ಬಂದಿದ್ದೇ 01/05/2017ರಿಂದ. ಆದ್ದರಿಂದ ಅದಕ್ಕೂ ಮೊದಲೇ ನಡೆದಿರುವ ಒಪ್ಪಂದಗಳ ನಿಬಂಧನೆಗೆ ಇದು ಅನ್ವಯಿಸುವುದಿಲ್ಲ ಎಂದು ವಾದಿಸುತ್ತಾರೆ. ಆದರೆ ಅವರ ವಾದ ತಪ್ಪು. ರೇರಾ ಕಾಯ್ದೆ ಕಲಂ 71ರಲ್ಲಿನ *Proviso* ದಲ್ಲಿ ಹೇಳಿರುವ ಪ್ರಕಾರ ಈ ಕಾಯ್ದೆ ಜಾರಿಗೆ ಬರುವ ಮೊದಲೇ ಗ್ರಾಹಕ ವೇದಿಕೆಯಲ್ಲಿ ಯಾವುದೇ *Delay Compensation* ಗೆ ಸಂಬಂಧ ಪಟ್ಟ ಕೇಸ್ ಇದ್ದಲ್ಲಿ ಈ ರೇರಾ ಪ್ರಾಧಿಕಾರಕ್ಕೆ ಅಂತಹ ಫಿರ್ಯಾದುಗಳನ್ನು ತೆಗೆದುಕೊಳ್ಳಲು ಬರುತ್ತದೆ

NOT AN OFFICIAL COPY

ಎನ್ನುವ ಅಂಶವು ಡೆವಲಪರ್ ಪರ ಮಂಡಿಸಿದ ವಾದವನ್ನು ಹುಸಿಗೊಳಿಸುತ್ತದೆ. ಅಂದರೆ ರೇರಾ ಕಾಯ್ದೆ ಕಲಂ 18ರಂತೆ *Delay Compensation/Refund* ಗೆ ಸಂಬಂಧಿಸಿದ ವಿವಾದಗಳು ರೇರಾ ಕಾಯ್ದೆ ಜಾರಿಗೆ ಬರುವ ಮೊದಲೇ ಹೂಡಲ್ಪಟ್ಟಿದ್ದರೂ ಸಹಾ ಅವುಗಳನ್ನು ರೇರಾದ ನ್ಯಾಯ ನಿರ್ಣಯಾಧಿಕಾರಿಯವರು ಕೇಳಲು ಅಧಿಕಾರವಿದೆ ಎನ್ನುವುದರಿಂದ ದಿನಾಂಕ: 01/05/2017ಕ್ಕಿಂತ ಹಿಂದೆ ಮಾಡಲ್ಪಟ್ಟ ಒಪ್ಪಂದ ಪತ್ರದ ಮೇಲೆ ವಿಚಾರಣೆ ನಡೆಸಬಾರದು ಎನ್ನುವ ಅವರ ವಾದ ಸರಿಯಲ್ಲ.

12. ಒಪ್ಪಂದ ಪತ್ರದಲ್ಲಿರುವ ಕಾಲವನ್ನು ಅರ್ಜಿ ನೋಂದಣಿಗಾಗಿ ಸಲ್ಲಿಸುವಾಗ ನೀಡಿದ *Completion date* ಕೇವಲ ಪ್ರಾಜೆಕ್ಟ್ ಅನ್ನು ಮುಕ್ತಾಯಗೊಳಿಸಲೇ ಬೇಕಾದ ಅನಿವಾರ್ಯತೆಗೆ ಕೊಡುವ ದಿನಾಂಕವಷ್ಟೇ. ಡೆವಲಪರ್ ಅದನ್ನೇ ತಮ್ಮ ಪರ ಅಸ್ತ್ರವನ್ನಾಗಿ ಮಾಡಿಕೊಳ್ಳಬಾರದು. ಏಕೆಂದರೆ ಇದೇ ತೀರ್ಪಿನಲ್ಲಿ ಯಾವುದೇ ಡೆವಲಪರ್ ತಮ್ಮ *Agreement*ನ *Clause* ಅನ್ನು *Rewrite* ಮಾಡಲು ಬರುವುದಿಲ್ಲ ಅಂತ ಹೇಳಲಾಗಿದೆ.

> *"Section 4(2)(l)(C) enables the promoter to revise the date of completion of project and hand over possession. The provisions of RERA, however, do not rewrite the clause of completion or handing over possession in agreement for sale. Section 4(2)(l)(C) enables the promoter to give fresh time line independent of the time period stipulated in the agreements for sale entered into between him and the allottees so that he is not visited with penal consequences laid down under RERA. In other words, by giving opportunity to the promoter to prescribe fresh time line under Section 4(2)(l)(C) he is not absolved of the liability under the agreement for sale...257. If the allottee does not intend to withdraw from the project he shall be paid by the promoter interest for every month's delay till handing over of the possession. The requirement to pay interest is not a penalty as the payment of interest is compensatory in nature in the light of the delay suffered by the allottee who has paid for his apartment but has not received possession of it."*

NOT AN OFFICIAL COPY

13. ಮೇಲೆ ಹೇಳಿದ ಅಂಶಗಳನ್ನು ಗಮನಿಸಿಕೊಂಡಾಗ ಡೆವಲಪರ್ ಹೇಳಿದ ವಾದದಲ್ಲಿ ಅರ್ಥ ಕಾಣುವುದಿಲ್ಲ. ಅಂದರೆ ದಿನಾಂಕ:01/05/2017ಕ್ಕಿಂತ ಮೊದಲೇ ಪ್ರಾಜೆಕ್ಟ್ ಅನ್ನು ಪ್ರಾರಂಭ ಮಾಡಿದ್ದರೂ ಕೂಡಾ ಒಪ್ಪಂದ ಪತ್ರದ ದಿನಾಂಕದ ಒಳಗೆ ಪ್ರಾಜೆಕ್ಟ್ ಅನ್ನು ಮುಕ್ತಾಯಗೊಳಿಸದಿದ್ದರೆ ಆಗ ದಿನಾಂಕ: 01/05/2017ರ ನಂತರ ಅಂತಹ ಪ್ರಾಜೆಕ್ಟ್‌ಗಳು *Ongoing* ಪ್ರಾಜೆಕ್ಟ್ ಆಗಿರುತ್ತವೆ. ಆದರೆ ದಿನಾಂಕ: 01/05/2017ಕ್ಕೆ ರೇರಾದಲ್ಲಿ ನೋಂದಣಿ ಮಾಡಿಸುವಾಗ ಡೆವಲಪರ್‌ಗೆ ಮುಕ್ತಾಯಗೊಳ್ಳುವ ದಿನಾಂಕ ಇರುವುದಿಲ್ಲ. ಏಕೆಂದರೆ ಆ ವೇಳೆಗಾಗಲೇ ಒಪ್ಪಂದ ಪತ್ರದಲ್ಲಿ ತೋರಿಸಿದ ದಿನಾಂಕವು ಮುಗಿದು ಹೋಗಿರಬಹುದು ಅಥವಾ ದಿನಾಂಕ: 01/05/2017ರ ನಂತರದಲ್ಲಿ ಮುಗಿಯ ಬಹುದಾದ ದಿನಾಂಕದ ಒಳಗಾಗಿ ಪ್ರಾಜೆಕ್ಟ್ ಅನ್ನು ಮುಕ್ತಾಯಗೊಳಿಸಲು ಡೆವಲಪರ್ ಇವರಿಗೆ ಸಾಧ್ಯವಾಗದಿರಬಹುದು. ಆದ್ದರಿಂದಲೇ ರೇರಾ ಕಾಯ್ದೆ ಕಲಂ 4(2)(*l*)(*c*) ನಲ್ಲಿ ಒಂದು ಅವಕಾಶವನ್ನು ಡೆವಲಪರ್‌ಗೆ ಕೊಟ್ಟಿದ್ದು ದಿನಾಂಕ: 01/05/2017ರ ಒಳಗಾಗಿ ಅವರು ಮುಂದಿನ ದಿನಾಂಕದಲ್ಲಿ ಎಷ್ಟು ಕಾಲಾವಕಾಶದ ಒಳಗೆ ಮುಗಿಸಲು ಸಾಧ್ಯವಿದೆ ಎನ್ನುವ ಕಾರಣದಿಂದಾಗಿ ಹೊಸ ಅವಕಾಶವನ್ನು ನೀಡಲಾಗಿದೆ. ಆದರೆ ಅದರ ಅರ್ಥ ಈಗಾಗಲೇ ಒಪ್ಪಂದ ಪತ್ರದಲ್ಲಿ ತೋರಿಸಿದ ದಿನಾಂಕವನ್ನು ಅಳಿಸಿ ಹಾಕುತ್ತದೆ ಎನ್ನುವುದಲ್ಲ. ಆದ್ದರಿಂದ ಡೆವಲಪರ್ ಪರ ವಕೀಲರು ಮಾಡಿದ ವಾದದಲ್ಲಿ ಅರ್ಥವಿಲ್ಲ.

14. ತನ್ನ ಪ್ರಾಜೆಕ್ಟ್ ಅನ್ನು ಮುಕ್ತಾಯಗೊಳಿಸಲು ಡೆವಲಪರ್ ಇವರಿಗೆ ಕಾನೂನು ಕೊಟ್ಟಿರುವ ಒಂದು ಸದವಕಾಶವೇ ಹೊರತು ಆ ಅವಕಾಶವು ಈಗಾಗಲೇ ಒಪ್ಪಂದ ಪತ್ರದಲ್ಲಿ ಬರೆದಿರುವ ದಿನಾಂಕವನ್ನು ತಿದ್ದುಪಡಿ ಮಾಡಿಕೊಡುವುದಿಲ್ಲ. ಹಾಗಾಗಿ ತಾನು ರೇರಾದಲ್ಲಿ ತೋರಿಸಿದಂತೆ ತನ್ನ ಪ್ರಾಜೆಕ್ಟ್‌ನ ಮುಕ್ತಾಯದ ದಿನಾಂಕದ ನಂತರದಿಂದ ಮಾತ್ರ ಪರಿಹಾರವನ್ನು ಕೊಡುತ್ತೇನೆ ಎನ್ನುವುದಾಗಲೀ, ಜುಲೈ 2017ರಿಂದ ಅಗ್ರಿಮೆಂಟ್‌ನಲ್ಲಿ ತೋರಿಸಿದಂತೆ ಒಂದು ಚದುರಡಿಗೆ ರೂ. 6/- ರಂತೆ ಕೊಡುತ್ತೇನೆ ಅಂತ ವಾದಿಸುವುದಾಗಲೀ ಸರಿಯಲ್ಲ.

15. ಫಿರ್ಯಾದುದಾರರು ತಮ್ಮ ಫಿರ್ಯಾದಿನಲ್ಲಿ ಹೇಳಿದ ಅಂಶಗಳನ್ನು ಗಮನಿಸುವುದು ಅವಶ್ಯಕ. ಅವರ ಪ್ರಕಾರ ಅವರು ಈಗಾಗಲೇ ಸ್ವಾಧೀನವನ್ನು ಪಡೆದುಕೊಂಡಿದ್ದಾರೆ. ಅಲ್ಲದೆ ನಿರ್ದಿಷ್ಟ ಅವಧಿ ಒಳಗಡೆ ಸ್ಥಳ ಪರಿಶೀಲನೆಗೆ ಬಾರದೇ ಹೋದರೆ *Holding Charges* ಹಾಕಲಾಗುವುದು ಅಂತ ಡೆವಲಪರ್ ಹೇಳಿದ್ದರು ಅಂತ ಹೇಳುತ್ತಾರೆ. ಆ ರೀತಿ *Holding Charges* ಅಂತ ಡೆವಲಪರ್ ಹಾಕಲು ಬರುವುದಿಲ್ಲ. ಅಲ್ಲದೆ ರೇರಾ ಕಾಯ್ದೆ ಕಲಂ 19(7)ರ ಪ್ರಕಾರ ಗ್ರಾಹಕರು ಯಾವ ದರದಲ್ಲಿ ಬಡ್ಡಿಗೆ ಅರ್ಹರೋ ಅದೇ ದರದಲ್ಲಿ ಮಾತ್ರ ಡೆವಲಪರ್ ಬಡ್ಡಿಯನ್ನು ಪಡೆಯಬೇಕೇ ಹೊರತು ಅದಕ್ಕೆ ವಿರುದ್ದವಾಗಿ ಅಲ್ಲ. ಮೇಲಾಗಿ ಡೆವಲಪರ್‌ಇವರು ರೂ. 50,000/-ಗಳನ್ನು *Delay Compensation* ಅಂತ ನೀಡಿದ್ದಾರೆ.

NOT AN OFFICIAL COPY

16. ಈ ಪ್ರಕರಣದಲ್ಲಿ ಫಿರ್ಯಾದುದಾರರು ಕ್ರಯ ಪತ್ರವನ್ನು ತೆಗೆದುಕೊಂಡಿದ್ದಾರೆ, ಸ್ವಾಧೀನವನ್ನು ಸಹಾ ಪಡೆದುಕೊಂಡಿದ್ದಾರೆ. ಡೆವಲಪರ್ ಇವರು ಫಿರ್ಯಾದುದಾರರಿಗೆ *Delay Compensation* ಅಂತ ರೂ. 50,000/- ನೀಡಿದ್ದಾರೆ. ಅಥವಾ ಫಿರ್ಯಾದುದಾರರಿಂದ ತಮಗೆ ಬರಬೇಕಾದ ಹಣದಲ್ಲಿ ಹೊಂದಾಣಿಕೆ ಮಾಡಿಕೊಂಡಿದ್ದಾರೆ. ಒಪ್ಪಂದ ಪತ್ರದ ಪ್ರಕಾರ ಜುಲೈ 2017ರಿಂದ ಅವರು *Delay Compensation* ಗೆ ಅರ್ಹರು. ಹಾಗೆ ಎಲ್ಲಿಯವರೆಗೆ ಅರ್ಹರು? ಅಂತ ನೋಡಿದಾಗ *Occupancy Certificate* ಪಡೆದುಕೊಂಡು ಕ್ರಯ ಪತ್ರ ಬರೆದುಕೊಡುವವರೆಗೆ ಕೊಡಬೇಕಾಗುತ್ತದೆ. ಆದರೆ ಇಲ್ಲಿ ಡೆವಲಪರ್ ಇವರು ಫಿರ್ಯಾದುದಾರರಿಗೆ ದಿನಾಂಕ: 28/02/2019ರಂದು ಕ್ರಯ ಪತ್ರವನ್ನು ಬರೆದುಕೊಟ್ಟಿದ್ದಾರೆ ಹಾಗೂ ಸ್ವಾಧೀನವನ್ನು ಕೊಟ್ಟಿದ್ದಾರೆ. ಅದನ್ನೇ ಫಿರ್ಯಾದುದಾರರು ತಮ್ಮ ಫಿರ್ಯಾದಿನಲ್ಲಿ ಪ್ರಸ್ತಾಪಿಸಿದ್ದಾರೆ. ಈ ಸಂಬಂಧ ಫಿರ್ಯಾದುದಾರರು ತಮ್ಮ ಪತ್ರದಲ್ಲಿ ಹೀಗೆ ಬರೆಯುತ್ತಾರೆ.

***Case: Delay Compensation as per RERA***

1. *As per construction agreement completion and delivery of possession for flat unit: 01-13-02 was December 2016*

2. *Builder has communicated the delay compensation calculation formula on 6th Nov 2017, as per RERA guideline.{Total flat cost received X(SBI PLR rate + 2%)X No of Days}.*

3. *Received an intimation for flat inspection on 26th Jan 2019, stating (Please come forward and inspect the unit in another 7 days from today otherwise we will not left with the other option to charge the Holding Charges for the units as per the agreement)*

4. *Communicated at 28th Jan 2019 to adjust the delay compensation amount in the final payment. It was mentioned to me that it will be adjusted later and I had emailed KKR, CEO to take it up but no response. I didn't have any other choice to make the full payment and proceed with the registration.*



30/05/2020

NOT AN OFFICIAL COPY

5. *I had followed up for the delay compensation amount but no response. Finally got the response on 24th January 2020 to collect the cheque. When contacted they had mentioned that it is only Rs.50,000/- and not as per RERA. Reply to them stating that I need the delay compensation as per RERA. I would like to bring to your notice that for few of them maximum Rs.50,000/-was paid and filed complaint with RERA and own the case against Shriram Properties. Few Case numbers: CMP/190414/0002594 and CMP/190311/0002339.*

6. *Occupancy certificate is not obtained so for the project Shriram Summitt.*

7. *On 5th February 2020 is my 7th appearance for my complaint with RERA providing all the justification needed to ask the delay compensation.*

17. ಇದನ್ನು ನೋಡಿದಾಗ ಜುಲೈ2017ರಿಂದ *Sale Deed* ಆಗುವವರೆಗಿನ ಅವಧಿಗೆ ಡೆವಲಪರ್ ಇವರು ಫಿರ್ಯಾದುದಾರರಿಗೆ ರೂ.50,000/–ಗಳನ್ನು *Delay Compensation* ಅಂತ ನೀಡಿದ್ದಾರೆ. ಅದು ರೇರಾ ಕಾಯ್ದೆಗೆ ಅನುಗುಣವಾಗಿಲ್ಲ ಎನ್ನುವುದು ನಿಜವೇ. ಅದನ್ನು ಸರಿಮಾಡಿಸಿಕೊಡಿ ಅಂತ ಫಿರ್ಯಾದುದಾರರು ಕೇಳುತ್ತಾರೆ. ಆದರೆ ರೇರಾ ಕಾಯ್ದೆ ಕಲಂ 18 & 19(10)ರ ಪ್ರಕಾರ ಡೆವಲಪರ್ ಇವರು *Occupancy Certificate* ಪಡೆದುಕೊಂಡ ನಂತರದಲ್ಲಿ *Sale Deed* ಬರೆದುಕೊಡಬೇಕಾಗಿತ್ತು, ಸ್ವಾಧೀನವನ್ನು ಕೊಡಬೇಕಾಗಿತ್ತು. ಆದರೆ *Occupancy Certificate* ಬಂದಿರವ ಬಗ್ಗೆ ಯಾರೂ ಹೇಳುವುದಿಲ್ಲ. ಆ ಹಿನ್ನೆಲೆಯಲ್ಲಿ ಫಿರ್ಯಾದುದಾರರು ಕೇಳಿಕೊಂಡಂತೆ ಜುಲೈ 2017ರಿಂದ ಕ್ರಯ ಪತ್ರದ ದಿನಾಂಕದವರೆಗೆ ರೇರಾ ಕಾಯ್ದೆಯ ಅಡಿಯಲ್ಲಿ ಹೇಳಿದಂತೆ ಫಿರ್ಯಾದುದಾರರು *Delay Compensation* ಗೆ ಅರ್ಹರು. ಅದರಲ್ಲಿ ಡೆವಲಪರ್ ಇವರು ಕೊಟ್ಟ ರೂ. 50,000/–ಗಳನ್ನು ಕಳೆಯಬೇಕಾಗುತ್ತದೆ. ಹಾಗಾಗಿ ಈ ಫಿರ್ಯಾದನ್ನು ಭಾಗಶಃ ಮಂಜೂರು ಮಾಡಿದೆ.

NOT AN OFFICIAL COPY

18. ಅಂತಿಮ ಆದೇಶ ಬರೆಯುವ ಮೊದಲು ಒಂದು ಮಾತು. ರೇರಾ ಕಾಯ್ದೆ ಕಲಂ 71(2) ಪ್ರಕಾರ ಫಿರ್ಯಾದುಗಳನ್ನು 60 ದಿನಗಳ ಒಳಗೆ ಇತ್ಯರ್ಥ ಪಡಿಸಬೇಕು. ಒಂದು ವೇಳೆ ಇತ್ಯರ್ಥ ಪಡಿಸಲು ಸಾಧ್ಯವಾಗದಿದ್ದರೆ ಅದಕ್ಕೆ ಪ್ರಾಧಿಕಾರವು ಕಾರಣಗಳನ್ನು ನೀಡಬೇಕಾಗುತ್ತದೆ. ಈ ಫಿರ್ಯಾದನ್ನು ದಿನಾಂಕ: 24/09/2019 ರಲ್ಲಿ ಸಲ್ಲಿಸಲಾಗಿದೆ. ಈ ಪ್ರಾಧಿಕಾರದ ಮುಂದೆ ಈ ಪ್ರಕರಣದಲ್ಲಿ ಪಕ್ಷಕಾರರುದಿನಾಂಕ: 21/11/2019ರಂದು ಹಾಜರಾಗಿದ್ದಾರೆ. ವಾದ ಕೇಳಿ ಆದೇಶಕ್ಕೆ ಇಡಲಾಯಿತು. ಈ ನಡುವೆ ದಿನಾಂಕ: 16/03/2020ರಿಂದ ಕೊರೋನಾ ಸಾಂಕ್ರಾಮಿಕ ರೋಗದ ಹಿನ್ನಲೆಯಲ್ಲಿ ತೆಗೆದುಕೊಂಡ ಮುನ್ನೆಚ್ಚರಿಕೆಯ ಕ್ರಮವಾಗಿ ಸಾಮಾಜಿಕ ಅಂತರವನ್ನು ಕಾಯ್ದುಕೊಳ್ಳುವ ಸಲುವಾಗಿ ಕಡತಗಳ ಮೇಲಿನ ವಿಚಾರಣೆಯನ್ನು ಸ್ಥಗಿತಗೊಳಿಸಲಾಗಿತ್ತು. ದಿನಾಂಕ: 24/03/2020ರಿಂದ ದಿನಂಕ: 17/05/2020ರ ವರೆಗೆ ರಾಜ್ಯ ಸರ್ಕಾರವು ಲಾಕ್‌ಡೌನ್ ಘೋಷಿಸಿದ್ದರ ಹಿನ್ನೆಲೆಯಲ್ಲಿ ಪ್ರಕರಣವನ್ನು ಕೈಗೆತ್ತಿಕೊಳ್ಳಲು ಸಾಧ್ಯವಾಗಿರಲಿಲ್ಲ. ಹಾಗಾಗಿ ಈ ಎರಡೂ ಕಾರಣಗಳಿಂದ ಈ ಪ್ರಕರಣವನ್ನು ಕಾಲಮಿತಿಯಲ್ಲಿ ಇತ್ಯರ್ಥಪಡಿಸಲಾಗಿರುವುದಿಲ್ಲ. ನಂತರದಲ್ಲಿ ಪ್ರಕರಣವನ್ನು ಕೈಗೆತ್ತಿಕೊಂಡು ಈಗ ತೀರ್ಪನ್ನು ಪ್ರಕಟಿಸಲಾಗುತ್ತಿದೆ. ಆದ್ದರಿಂದ ಈ ಕೆಳಕಂಡಂತೆ ಆದೇಶ:

## ಆದೇಶ

ಮೇಲೆ ಚರ್ಚಿಸಿದ ಕಾರಣಗಳಿಗಾಗಿ ಫಿರ್ಯಾದು ಸಂಖ್ಯೆ: **CMP/190924/0004282** ಅನ್ನು ಭಾಗಶಃ ಮಂಜೂರುಗೊಳಿಸಿದೆ.

1. ಫಿರ್ಯಾದುದಾರರು ಡೆವಲಪರ್ ಇವರಿಗೆ ಫ್ಲಾಟ್ ಅನ್ನು ಖರೀದಿಸುವ ನಿಮಿತ್ತ ಕ್ರಯ ಪತ್ರದಲ್ಲಿ ತೋರಿಸಿರುವ ಅಸಲು ಹಣದ ಮೇಲೆ ಅನ್ವಯವಾಗುವಂತೆ ವಾರ್ಷಿಕವಾಗಿ *State Bank of India* ಅವರು ಗೃಹ ಸಾಲಕ್ಕೆ ಈ ದಿನಾಂಕಕ್ಕೆ ನಿಗದಿ ಪಡಿಸಿರುವ ಬಡ್ಡಿಗಿಂತ ಶೇಕಡಾ 2% ರಷ್ಟು ಹೆಚ್ಚುವರಿ ಸರಳ ಬಡ್ಡಿಯನ್ನು ಡೆವಲಪರ್ ಇವರು ಕೊಡುವುದು.
2. ಫಿರ್ಯಾದುದಾರರಿಗೆ ಸದರಿ ಬಡ್ಡಿಯನ್ನು ಜುಲೈ 2017ರಿಂದ ಫೆಬ್ರವರಿ 2019ರ ವರೆಗೆ ಕೊಡುವುದು.
3. ಕ್ರಯ ಪತ್ರದಲ್ಲಿ ನಮೂದಿಸಿದಂತೆ ಅಸಲು ಹಣಕ್ಕೆ ಮೇಲೆ ಹೇಳಿದ ಬಡ್ಡಿಯನ್ನು ಲೆಕ್ಕಾಚಾರ ಮಾಡಿ ಕೊಡುವುದು.
4. ಹಾಗೆ ಬಂದ ಮೊತ್ತದಲ್ಲಿ ರೂ. 50,000/–ಗಳನ್ನು ಕಳೆಯುವುದು.
5. ವ್ಯಾಜ್ಯದ ಖರ್ಚು ಅಂತ ಫಿರ್ಯಾದುದಾರರಿಗೆ ಡೆವಲಪರ್‌ರವರು ರೂ. 5,000/–ಗಳನ್ನು ಕೊಡತಕ್ಕದ್ದು.
6. ಪಕ್ಷಕಾರರಿಗೆ ಈ ಆದೇಶದ ಬಗ್ಗೆ ಮಾಹಿತಿಕೊಡುವುದು.

[ಈ ತೀರ್ಪನ್ನು ಬೆರಳಚ್ಚುಗಾರರಿಗೆ ನೇರವಾಗಿ ಬೆರಳಚ್ಚು ಮಾಡುವ ಮೂಲಕ ದಿನಾಂಕ: 30.05.2020 ರಂದು ಪ್ರಕಟಿಸಲಾಗಿದೆ].

(ಕೆ. ಪಾಲಾಕ್ಷಪ್ಪ)
Adjudicating officer

NOT AN OFFICIAL COPY